ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

**ಮೇಲ್ಮನೆ ಸ್ಪರ್ಧೆ** ಜೆಡಿಎಸ್ 'ಜಾತ್ಯತೀತ' ಬಣ್ಣ ಬಯಲಿಗೆಳೆವ ತಂತ್ರ | ಕುತೂಹಲ ಹೆಚ್ಚಿಸಿದ ವಿಧಾನಪರಿಷತ್ ಸಭಾಪತಿ ಆಯ್ಕೆ

# ನಜೀರ್ ಅಖಾಡಕ್ಕಿಳಿಸಲು ಕಾಂಗ್ರೆಸ್ ನಿರ್ಧಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮಂಗಳವಾರ ನಡೆಯಲಿರುವ ವಿಧಾನ ಪರಿಷತ್ ಸಭಾಪತಿ ಸ್ಥಾನದ ಚುನಾವಣೆಗೆ ತನ್ನ ಅಭ್ಯರ್ಥಿಯಾಗಿ ಮೇಲ್ಮನೆ ಸದಸ್ಯ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸಲು ಪ್ರತಿಪಕ್ಷ ಕಾಂಗ್ರೆಸ್ ಭಾನುವಾರ ಅಧಿಕೃತವಾಗಿ ತೀರ್ಮಾನಿಸಿದೆ.



ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ನಿವಾಸದಲ್ಲಿ ಭಾನುವಾರ ನಡೆದ ಪಕ್ಷದ ಶಾಸಕರು, ಪರಿಷತ್ ಸದಸ್ಯರ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಇದರ ಬೆನ್ನಲ್ಲೇ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಕೂಡ ಸಭಾಪತಿ ಸ್ಥಾನಕ್ಕೆ ತಮ್ಮ ಪಕ್ಷದ ಅಭ್ಯರ್ಥಿಯಾಗಿ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸುವುದಾಗಿ ಪ್ರಕಟಿಸಿದ್ದಾರೆ. ನಮ್ಮ ಪಕ್ಷದಿಂದ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸುತ್ತೇವೆ. ಯಾವ ಯಾವ ಪಕ್ಷದವರು ಏನು ನಿರ್ಧಾರ ಕೈಗೊಳ್ಳುತ್ತಾರೆ ಅಂತ ಕಾದು ನೋಡೋಣ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯ ಅವರ ನಿವಾಸದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾರೆಡ್ಡಿ, ಎಐಸಿಸಿ ಪ್ರಧಾನಕಾರ್ಯದರ್ಶಿ ದಿನೇಶ್ ಗುಂಡೂರಾವ್, ಪರಿಷತ್ ಸದಸ್ಯ ಪಿ.ಆರ್. ರಮೇಶ್ ಸೇರಿದಂತೆ ಮತ್ತಿತರ ನಾಯಕರು ಸಭೆ ನಡೆಸಿದ್ದು, ಈ ವೇಳೆ ಸಭಾಪತಿ ಚುನಾವಣೆಗೆ ಕಾಂಗ್ರೆಸ್‌ನಿಂದ ಸಿದ್ದರಾಮಯ್ಯ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸಲು ನಿರ್ಧರಿಸಿದ್ದಾರೆ. ಪರಿಷತ್‌ನಲ್ಲಿ ಸಭಾಪತಿ ಸ್ಥಾನ ಗೆಲ್ಲಲು ನಮಗೆ ನಂಬರ್ ಕೊರತೆ ಇದ್ದರೂ ಅಭ್ಯರ್ಥಿ ಕಣಕ್ಕಿಳಿಸೋಣ. ಅವಿರೋಧ ಆಯ್ಕೆಗೆ ಅವಕಾಶ ನೀಡುವುದು ಬೇಡ. ಅಲ್ಲದೆ, ಪರಿಷತ್‌ನಲ್ಲಿ ಜೆಡಿಎಸ್ ಪಕ್ಷ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದೆ. ಜೆಡಿಎಸ್ ಎಂಬುದು ಬಿಜೆಪಿಯ ಬಿ ಟೀಂ ಅನ್ನೋದನ್ನು ತೋರಿಸಲು ಕೂಡ ಇದು ಒಳ್ಳೆಯ ಅವಕಾಶ ಎಂದು ನಾಯಕರು ಈ ತೀರ್ಮಾನಕ್ಕೆ ಬಂದಿದ್ದಾರೆ ಎಂದು ತಿಳಿದು ಬಂದಿದೆ.

## ಪರಿಷತ್‌ಗೆ ಇಂದು ನಾಮಪತ್ರ ಸಲ್ಲಿಕೆ

### ಬಸವರಾಜ್ ಹೊರಟ್ಟಿ, ನಜೀರ್ ಉಮೇದುವಾರಿಕೆ | ನಾಳೆ ಮತದಾನ



ಬೆಂಗಳೂರು: ವಿಧಾನಪರಿಷತ್ತಿನ ಸಭಾಪತಿ ಚುನಾವಣೆಗೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್‌ನ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಅವರು ಸೋಮವಾರ ನಾಮಪತ್ರ ಸಲ್ಲಿಸಲಿದ್ದು, ಕಾಂಗ್ರೆಸ್ಸಿಂದ ನಜೀರ್ ಅಹಮದ್ ಅವರು ಅಭ್ಯರ್ಥಿಯಾಗಿ ಕಣಕ್ಕಿಳಿಯುವುದು ಬಹುತೇಕ ನಿಶ್ಚಿತವಾಗಿದೆ.

ಸೋಮವಾರ ಮಧ್ಯಾಹ್ನ 12 ಗಂಟೆವರೆಗೆ ನಾಮಪತ್ರ ಸಲ್ಲಿಸಲು ಸಮಯಾವಕಾಶ ಇದೆ. ಜೆಡಿಎಸ್ ನಾಯಕ ಎಚ್.ಡಿ. ರೇವಣ್ಣ ಅವರ ಸಲಹೆಯಂತೆ ಹೊರಟ್ಟಿ ಅವರು ಬೆಳಗ್ಗೆ 10.15ರಿಂದ 10.30ರೊಳಗಿನ ಶುಭಗಳಿಗೆಯಲ್ಲಿ ಉಮೇದುವಾರಿಕೆ ಸಲ್ಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಒಬ್ಬರಿಗಿಂತ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿ ಉಳಿವುದರಿಂದ ಮಂಗಳವಾರ ಚುನಾವಣೆ ನಡೆಯ ಲಿದೆ. ಬಳಿಕ ನೂತನ ಸಭಾಪತಿ ಆಯ್ಕೆ ಘೋಷಣೆ ಮಾಡಲಾಗುತ್ತದೆ.

ಒಟ್ಟು 75 ಸದಸ್ಯರು ಇರುವ ಮೇಲ್ಮನೆಯಲ್ಲಿ ಎಸ್.ಎಲ್. ಧರ್ಮೇಗೌಡ ಅವರ ನಿಧನದಿಂದ ಒಂದು ಸ್ಥಾನ ಖಾಲಿ ಇದೆ. ಉಳಿದಂತೆ ಬಿಜೆಪಿ 31, ಜೆಡಿಎಸ್ 13,(ಒಟ್ಟು 44), ಕಾಂಗ್ರೆಸ್ 28, ಹಂಗಾಮಿ ಸಭಾಪತಿಯೂ ಆಗಿರುವ ಉಪಸಭಾಪತಿ ಹಾಗೂ ಒಬ್ಬ ಪಕ್ಷೇತರ ಸದಸ್ಯರಿದ್ದಾರೆ. ಒಟ್ಟು ಸದಸ್ಯ ಬಲದ ಶೇ. 50 ಮತಗಳು ದೊರಕಿದರೆ ಸಭಾಪತಿ ಚುನಾವಣೆಯಲ್ಲಿ ಗೆಲುವು ಸಾಧ್ಯ. ಜೆಡಿಎಸ್-ಬಿಜೆಪಿ ಬಳಿ ಅಗತ್ಯಕ್ಕಿಂತ ಹೆಚ್ಚಿನ ಮತಗಳಿವೆ.

ಸಂಖ್ಯಾಬಲ ಹೆಚ್ಚಿರುವುದರಿಂದ ಹೊರಟ್ಟಿ ಗೆಲುವು ಖಚಿತವಾಗಿದೆ. ಆದರೆ, ತಾನು ಜಾತ್ಯತೀತ ಎಂದು ಹೇಳಿಕೊಳ್ಳುವ ಜೆಡಿಎಸ್ ಪಕ್ಷ ಬಿಜೆಪಿ ಜೊತೆಕೈ ಜೋಡಿಸಿರುವುದನ್ನು ಜನರ ಮುಂದಿಡುವ ತಂತ್ರದ ಭಾಗವಾಗಿ ಕಾಂಗ್ರೆಸ್ ಪಕ್ಷ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಮುಂದಾಗಿದೆ. ಒಂದು ವೇಳೆ ಅಭ್ಯರ್ಥಿ ಕಣಕ್ಕಿಳಿಸದಿದ್ದರೆ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಅವಿರೋಧವಾಗಿ ಗೆಲುವು ಸಾಧಿಸಬಹುದು.